ದಿನಾಂಕಃ07-07-2017 ರಂದು ವಾದಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು. ಇವರು ತಮ್ಮ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅವರನ್ನು ಪಿ.ಡಬ್ಲ್ಯೂ-1 ಎಂದು ಪರಿಗಣಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ.ಎಸ್‌ವಿಎಂ ವಕೀಲರಿಂದಃ

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಸಿರುತ್ತೇನೆ ಮತ್ತು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿರುತ್ತದೆ. ಅದರಲ್ಲಿರುವ ಸಹಿ ನನ್ನದೇ ಇರುತ್ತದೆ.

ನಾನು ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸರ್ವೆ ನಂಃ 63/3 ಪಹಣಿಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ-1 ಎಂದು ಗುರುತಿಸಲಾಯಿತು. ನೋಟಿಸಿನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ-2 ಎಂದು ಗುರುತಿಸಲಾಯಿತು. ಪ್ರತಿವಾದಿಯು ವಾದಿಯ ಪರ ವಕೀಲರಿಗೆ ನೀಡಿದ ನೋಟಿಸಿನ ಪ್ರತ್ಯುತ್ತರದ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ-3 ಎಂದು ಗುರುತಿಸಲಾಯಿತು. ಆದ್ದರಿಂದ ದಾವೆಯಲ್ಲಿ ಕೋರಿರುವಂತೆ ದಾವೆಯನ್ನು ಡಿಕ್ರಿ ಮಾಡಬೇಕಾಗಿ ಪ್ರಾರ್ಥನೆ.

ಮುಂದುವರೆದ ಮುಖ್ಯವಿಚಾರಣೆಗೆ ಶ್ರೀ.ಎಸ್‌ವಿಎಂ ವಕೀಲರು ಸಮಯಾವಕಾಶ ಕೇಳಿದ್ದರಿಂದ ಸಮಯವನ್ನು ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೇ.ಸ.ಇದೆ ಎಂದು ಒಪ್ಪಿರುತ್ತಾರೆ.

ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ

ದಿನಾಂಕಃ07-07-2017 ಹಾನಗಲ್ಲ.

ಸಾಕ್ಷಿದಾರರ ಸಹಿ